ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**24.01.2025 / 19.35 hrs**

**<><*<><>*><>**

ಮುಖ್ಯಾಂಶಗಳು

**೧.ಮತದಾರರ ಬಯೋಮೆಟ್ರಿಕ್ ದೃಢೀಕರಣದಿಂದ ನಕಲಿ ಮತದಾನಕ್ಕೆ ತಡೆ- ಮುಖ್ಯಚುನಾವಣಾ ಆಯುಕ್ತ ರಾಜೀವ್ ಕುಮಾರ್**

**೨.ಇಂದು ರಾಷ್ಟ್ರೀಯ ಹೆಣ್ಣುಮಕ್ಕಳ ದಿನ; ಹೆಣ್ಣುಮಕ್ಕಳ ಸುರಕ್ಷತೆಗೆ ಒತ್ತು**

**೩.ಆಧುನಿಕ ತಂತ್ರಜ್ಞಾನ ವೃದ್ಧಿಗೆ ಬಂಡವಾಳ ಆಕರ್ಷಿಸಲು ಸರ್ಕಾರದಿಂದ ಪೂರಕ ವಾತಾವರಣ- ಸಚಿವ ಡಾ.ಜಿತೇಂದ್ರ ಸಿಂಗ್**

**೪.ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಭಾನುವಾರದಿಂದ ಎರಡು ದಿನಗಳ ಕಾಲ ಚೀನಾ ಭೇಟಿ**

**<><*<><>*><>**

ಬಯೋಮೆಟ್ರಿಕ್ ದೃಢೀಕರಣವು ಒಂದು ಭರವಸೆಯ ನಾವೀನ್ಯತೆಯಾಗಿದ್ದು, ಇದು ನಕಲಿ ಮತ ಚಲಾವಣೆ ಮತ್ತು ಒಂದಕ್ಕಿಂತ ಹೆಚ್ಚಿನ ಬಾರಿ ಮತದಾನವನ್ನು ತಪ್ಪಿಸುವುದಲ್ಲದೆ, ಚಲಾಯಿಸಿದ ಮತಗಳು ಸರಿಯಾದ ಅಭ್ಯರ್ಥಿಗೆ ಸೇರಿದೆ ಎಂಬುದನ್ನು ಖಚಿತಪಡಿಸುತ್ತದೆ ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಹೇಳಿದ್ದಾರೆ. ನವದೆಹಲಿಯಲ್ಲಿ ಭಾರತ ಚುನಾವಣಾ ಆಯೋಗ ಆಯೋಜಿಸಿದ್ದ ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನದ ಸಮಾರೋಪ ಸಮಾರಂಭ ಉದ್ದೇಶಿಸಿ ಅವರು ಮಾತನಾಡಿದರು. ದೇಶದಲ್ಲಿ ಮತದಾರರ ಬಯೋಮೆಟ್ರಿಕ್ಸ್ ಸಂಗ್ರಹಿಸುವ ಕಾರ್ಯ ಪ್ರಾರಂಭವಾಗಿದ್ದು, ಈ ಪ್ರಕ್ರಿಯೆಯು ಮುಂದುವರೆದಿದೆ ಎಂದು ರಾಜೀವ್ ಕುಮಾರ್ ತಿಳಿಸಿದರು. ರಿಮೋಟ್ ತಂತ್ರಜ್ಞಾನ ಮೂಲಕದ ಮತದಾನವು ನಾಗರಿಕರು ಎಲ್ಲಿಯೇ ಇದ್ದರೂ ಮತ ಚಲಾಯಿಸಲು ಅನುವು ಮಾಡಿಕೊಡುತ್ತದೆ. ಇದರಿಂದ ವಿಶೇಷಚೇತನರು, ವೃದ್ಧರು ಮತ್ತು ವಿದೇಶದಲ್ಲಿ ವಾಸಿಸುವವರಿಗೆ ಅನುಕೂಲವಾಗಲಿದೆ. ರಿಮೋಟ್ ಮತದಾನದ ಯಾವುದೇ ಕಾರ್ಯವಿಧಾನವು ಸಂಪೂರ್ಣ ಗೌಪ್ಯತೆ ಮತ್ತು ಮತದಾನದ ಸುರಕ್ಷತೆಯೊಂದಿಗೆ ಇರಬೇಕು ಎಂದು ಅವರು ಪ್ರತಿಪಾದಿಸಿದರು. ಸಮ್ಮೇಳನದ ಎರಡನೇ ದಿನದಂದು, ಚುನಾವಣಾ ನಿರ್ವಹಣಾ ಸಂಸ್ಥೆಗಳು, 'ದೆಹಲಿ ಘೋಷಣೆ ೨೦೨೫' ಅನ್ನು ಅಂಗೀಕರಿಸಿದವು.

**<><*<><>*><>**

ದೇಶಾದ್ಯಂತ ಇಂದು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನವನ್ನು ಆಚರಿಸಲಾಯಿತು. ಸಮಾಜದಲ್ಲಿ ಹೆಣ್ಣು ಮಕ್ಕಳ ಹಕ್ಕುಗಳು, ಶಿಕ್ಷಣ, ಆರೋಗ್ಯ ಹಾಗೂ ಸುರಕ್ಷತೆಯ ಬಗ್ಗೆ ಜಾಗೃತಿ ಮೂಡಿಸುವ ಗುರಿಯನ್ನು ಇದು ಹೊಂದಿದೆ. ಪ್ರತಿ ವರ್ಷ ಜನವರಿ ೨೪ ರಂದು ಆಚರಿಸಲಾಗುವ ಈ ದಿನ. ಪ್ರತಿಯೊಬ್ಬ ಹೆಣ್ಣು ಮಗುವನ್ನು ಗೌರವದಿಂದ ನಡೆಸಿಕೊಳ್ಳುವ, ಅವರನ್ನು ಬೆಳೆಯಲು, ಕಲಿಯಲು ಹಾಗೂ ಅಭಿವೃದ್ಧಿ ಹೊಂದಲು ಸಮಾನ ಅವಕಾಶ ಹೊಂದಿರುವುದನ್ನು ಖಾತರಿಪಡಿಸಿಕೊಳ್ಳುವುದನ್ನು ನೆನಪಿಸುತ್ತದೆ. ಪ್ರಧಾನಿ ನರೇಂದ್ರ ಮೋದಿ ಅವರು, ೧೦ ವರ್ಷಗಳ ಹಿಂದೆ ೨೦೧೫ರ ಜನವರಿ ೨೨ ರಂದು ಪ್ರಾರಂಭಿಸಿದ 'ಬೇಟಿ ಬಚಾವೋ-ಬೇಟಿ ಪಡಾವೋ' ವಾರ್ಷಿಕೋತ್ಸವ ಕೂಡ ಈ ದಿನವನ್ನು ಸೂಚಿಸುತ್ತದೆ. ಈ ಮಹತ್ವದ ಉಪಕ್ರಮ ಹೆಣ್ಣು ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಸುರಕ್ಷತೆಯನ್ನು ಉತ್ತೇಜಿಸುವುದರ ಜೊತೆಗೆ ಹೆಣ್ಣು ಭ್ರೂಣ ಹತ್ಯೆ, ಬಾಲ್ಯವಿವಾಹ ಮತ್ತು ಲಿಂಗ ತಾರತಮ್ಯದಂತಹ ಸಮಸ್ಯೆಗಳನ್ನು ಪರಿಹರಿಸುವ ಗುರಿಯನ್ನು ಹೊಂದಿದೆ. ೨೦೨೫ರ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನದ ಧ್ಯೇಯ ವಾಕ್ಯ 'ಉಜ್ವಲ ಭವಿಷ್ಯಕ್ಕಾಗಿ ಹೆಣ್ಣು ಮಕ್ಕಳನ್ನು ಸಬಲೀಕರಣಗೊಳಿಸುವುದು' ಆಗಿದೆ. ಹೆಣ್ಣು ಮಕ್ಕಳಿಗೆ ಸಮಾಜದಲ್ಲಿ ಅವರ ಪಾತ್ರವನ್ನು ಗುರುತಿಸಿ, ಅವರ ಭವಿಷ್ಯವನ್ನು ಮುನ್ನಡೆಸಲು ಸಮಾನ ಅವಕಾಶ ಕಲ್ಪಿಸುವ ಅಗತ್ಯವನ್ನು ಒತ್ತಿ ಹೇಳಿದೆ.

**<><*<><>*><>**

ಆಧುನಿಕ ತಂತ್ರಜ್ಞಾನದಲ್ಲಿ ಅಗ್ರ ಸ್ಥಾನವನ್ನು ಹೊಂದುವ ಮೂಲಕ ಭಾರತವನ್ನು ಆರ್ಥಿಕವಾಗಿ ಮತ್ತು ರಾಷ್ಟ್ರೀಯ ಭದ್ರತಾ ದೃಷ್ಟಿಯಿಂದ ಸದೃಢಗೊಳಿಸಲು, ಈ ದಶಕವನ್ನು ತಂತ್ರಜ್ಞಾನ ಸಂಚಾಲಿತ ದಶಕ ಎಂದು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದಾರೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ಭಾರತೀಯ ವಿಜ್ಞಾನ ಸಂಸ್ಥೆ-ಐಐಎಸ್‌ಸಿ ಯಲ್ಲಿಂದು ವಿಡಿಯೋ ಕಾನ್ಫರೆನ್ಸ್ ಮೂಲಕ ತಂತ್ರಜ್ಞಾನ ಸಮಾಲೋಚನೆ ಎಂಬ ಸಮಾವೇಶವನ್ನುದ್ದೇಶಿಸಿ ಅವರು ಮಾತನಾಡುತ್ತಿದ್ದರು. ಆಧುನಿಕ ತಂತ್ರಜ್ಞಾನಗಳಿಂದ ಕ್ವಾಂಟಮ್ ಕಂಪ್ಯೂಟಿಂಗ್, ಕೃತಕಬುದ್ಧಿಮತ್ತೆ, ಹಸಿರು ಜಲಜನಕ ತಂತ್ರಜ್ಞಾನ ಮತ್ತು ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತ ಪ್ರಬುದ್ಧತೆ ಪಡೆಯಲು ವಿಶ್ವದ ಅನ್ಯ ಸಮ-ಮನಸ್ಕ ರಾಷ್ಟ್ರಗಳೊಂದಿಗೆ ಒಪ್ಪಂದ ಮಾಡಿಕೊಂಡಿದ್ದು, ಈ ಕ್ಷೇತ್ರದ ಸಂಪೂರ್ಣ ಲಾಭ ಭಾರತಕ್ಕೆ ಲಭಿಸುವಂತೆ ಸಕ್ರಿಯ ಪಾತ್ರ ವಹಿಸುತ್ತಿದೆ ಎಂದು ತಿಳಿಸಿದರು. ಈ ಕ್ಷೇತ್ರಗಳ ಸಾಮರ್ಥ್ಯ ವೃದ್ಧಿ ಮತ್ತು ನಾವೀನ್ಯತಾ ಪರಿಸರ ವೃದ್ಧಿಗೆ ಬಂಡವಾಳ ಆಕರ್ಷಿಸಲು ಸರ್ಕಾರ ಪೂರಕ ವಾತಾವರಣ ಕಲ್ಪಿಸುತ್ತಿದೆ ಎಂದು ಸಚಿವರು ಹೇಳಿದರು.

**ಧ್ವನಿ: ಜಿತೇಂದ್ರ ಸಿಂಗ್**

**<><*<><>*><>**

ನವದೆಹಲಿಯಲ್ಲಿಂದು ೨೦೨೫ರ ಗಣರಾಜ್ಯೋತ್ಸವದಲ್ಲಿ ಪಾಲ್ಗೊಳ್ಳಲಿರುವ ಎನ್‌ಸಿಸಿ ಕೆಡೆಟ್‌ಗಳು, ಎನ್‌ಎಸ್‌ಎಸ್ ಸ್ವಯಂ ಸೇವಕರು, ಯುವ ವಿನಿಮಯ ಯೋಜನೆ ಕೆಡೆಟ್‌ಗಳು, ಸ್ತಬ್ಧಚಿತ್ರಗಳ ಕಲಾವಿದರು ಹಾಗೂ ಬುಡಕಟ್ಟು ಅತಿಥಿಗಳನ್ನು ಪ್ರಧಾನಿ ನರೇಂದ್ರ ಮೋದಿ ಭೇಟಿ ಮಾಡಲಿದ್ದಾರೆ. ದೆಹಲಿಯ ಲೋಕ ಕಲ್ಯಾಣದ ಮಾರ್ಗದಲ್ಲಿರುವ ಪ್ರಧಾನಮಂತ್ರಿಗಳ ನಿವಾಸದಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿ, ಸ್ತಬ್ಧಚಿತ್ರ ಕಲಾವಿದರು, ಎನ್‌ಸಿಸಿ ಕೆಡೆಟ್‌ಗಳೊಂದಿಗೆ ಸಂವಾದ ನಡೆಸಲಿದ್ದಾರೆ.

**<><*<><>*><>**

ಭಾರತ ಮತ್ತು ಚೀನಾ ನಡುವಿನ ವಿದೇಶಾಂಗ ಕಾರ್ಯದರ್ಶಿ ಮಟ್ಟದ ಕಾರ್ಯವಿಧಾನದ ಸಭೆಗಾಗಿ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಭಾನುವಾರದಿಂದ ಎರಡು ದಿನಗಳ ಕಾಲ ಚೀನಾಕ್ಕೆ ಭೇಟಿ ನೀಡಲಿದ್ದಾರೆ. ಈ ಕುರಿತು ನವದೆಹಲಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಅವರು ಚೀನಾದಲ್ಲಿ ಅಲ್ಲಿನ ವಿದೇಶಾಂಗ ಕಾರ್ಯದರ್ಶಿಯನ್ನು ಭೇಟಿ ಮಾಡಲಿದ್ದಾರೆ. ಉಭಯರು ದ್ವಿಪಕ್ಷೀಯ ವಿಷಯಗಳ ಕುರಿತು ಚರ್ಚಿಸಲಿದ್ದಾರೆ ಎಂದು ತಿಳಿಸಿದರು. ಬಾಂಗ್ಲಾದೇಶ ಗಡಿಯಲ್ಲಿ ಬೇಲಿ ಹಾಕುವ ಕುರಿತು ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಭಾರತ ಮತ್ತು ಬಾಂಗ್ಲಾದೇಶದ ನಡುವೆ ಗಡಿಯಲ್ಲಿ ಬೇಲಿ ಹಾಕಲು ಹಲವು ಒಪ್ಪಂದಗಳಿವೆ. ಅಪರಾಧ-ಸಂಬಂಧಿತ ಘಟನೆಗಳನ್ನು ತಡೆಗಟ್ಟಲು ಗಡಿಯಲ್ಲಿ ಬೇಲಿ ಹಾಕುವುದು ಅವಶ್ಯಕ. ಗಡಿಯಲ್ಲಿ ಬೇಲಿ ಹಾಕಲು ಬಾಂಗ್ಲಾದೇಶದೊಂದಿಗೆ ಮಾಡಿಕೊಂಡ ಒಪ್ಪಂದಗಳನ್ನು ಸಹ ಸಕಾರಾತ್ಮಕವಾಗಿ ಜಾರಿಗೆ ತರಬೇಕೆಂದು ಭಾರತ ಬಯಸುತ್ತದೆ ಎಂದರು. ಎರಡೂ ದೇಶಗಳ ನಡುವಿನ ಒಪ್ಪಂದಗಳ ಪ್ರಕಾರ, ಗಡಿಯ ಎರಡೂ ಬದಿಗಳಲ್ಲಿ ಬೇಲಿ ಹಾಕಲಾಗುತ್ತಿದೆ ಎಂದು ರಣಧೀರ್ ಜೈಸ್ವಾಲ್ ಹೇಳಿದರು.

**ಧ್ವನಿ: ರಣಧೀರ್ ಜೈಸ್ವಾಲ್**

**<><*<><>*><>**

ಭಾರತವು ನೀರಿನ ಸಂರಕ್ಷಣೆಗೆ ಆಳವಾಗಿ ಬದ್ಧವಾಗಿದೆ. ಅಲ್ಲದೇ, ಈ ನಿರ್ಣಾಯಕ ವಲಯದಲ್ಲಿ ಪರಿವರ್ತನಾತ್ಮಕ ಕ್ರಾಂತಿ ಮಾಡುತ್ತಿದೆ ಎಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಹೇಳಿದ್ದಾರೆ. ದಾವೋಸ್‌ನಲ್ಲಿ ನಡೆದ ೨೦೨೫ರ ವಿಶ್ವ ಆರ್ಥಿಕ ವೇದಿಕೆಯ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ದೊಡ್ಡ ಪ್ರಮಾಣದ ಪ್ರಯತ್ನಗಳ ಮೂಲಕ, ಭಾರತವು ತನ್ನ ಜಲ ಸಂಪನ್ಮೂಲಗಳನ್ನು ಗಮನಾರ್ಹವಾಗಿ ಬಲಪಡಿಸಿದೆ. ಸುಸ್ಥಿರ ನೀರಿನ ನಿರ್ವಹಣೆಗೆ ಜಾಗತಿಕ ಮಾನದಂಡವನ್ನು ಸ್ಥಾಪಿಸಿದೆ ಎಂದರು. ಹವಾಮಾನ ಬದಲಾವಣೆ, ಅಧಿಕ ಜನಸಂಖ್ಯೆ ಮತ್ತು ಅತಿಯಾದ ಬಳಕೆಯಿಂದ ಮತ್ತಷ್ಟು

ಉಲ್ಬಣಗೊಂಡ ನೀರಿನ ಕೊರತೆಯು ಸಾರ್ವತ್ರಿಕ ಸವಾಲಾಗಿದೆ ಎಂದು ಅವರು ಹೇಳಿದರು. ಗ್ರಾಮೀಣ ಭಾರತಕ್ಕೆ ಸುರಕ್ಷಿತ ಕುಡಿಯುವ ನೀರಿನ ಪ್ರವೇಶವನ್ನು ಖಚಿತಪಡಿಸಿಕೊಳ್ಳುವಲ್ಲಿ ಸರ್ಕಾರ ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ ಎಂದು ಇದೇ ವೇಳೆ ಸಚಿವ ಸಿ.ಆರ್.ಪಾಟೀಲ್ ಹೇಳಿದರು.

**<><*<><>*><>**

೨೦೨೪ರ ವಕ್ಫ್ ತಿದ್ದುಪಡಿ ವಿಧೇಯಕ ಕುರಿತಾದ ಜಂಟಿ ಸಂಸದೀಯ ಸಮಿತಿಯ ಇಂದಿನ ಸಭೆಯಿಂದ ವಿರೋಧ ಪಕ್ಷದ ಹತ್ತು ಸಂಸದರನ್ನು ಅಮಾನತುಗೊಳಿಸಲಾಗಿದೆ. ಅಮಾನತುಗೊಂಡವರಲ್ಲಿ ಟಿಎಂಸಿಯ ಕಲ್ಯಾಣ್ ಬ್ಯಾನರ್ಜಿ, ಡಿಎಂಕೆಯ ಎ.ರಾಜಾ, ಕಾಂಗ್ರೆಸ್ ಸಂಸದರಾದ ನಾಸಿರ್ ಹುಸೇನ್ ಮತ್ತು ಇಮ್ರಾನ್ ಮಸೂದ್ ಹಾಗೂ ಸಮಾಜವಾದಿ ಪಕ್ಷದ ಮೊಹಿಬುಲ್ಲಾ ಸೇರಿದ್ದಾರೆ ಎಂದು ಮೂಲಗಳು ತಿಳಿಸಿವೆ. ಬಿಜೆಪಿ ಸಂಸದೆ ಅಪರಾಜಿತಾ ಸಾರಂಗಿ, ಸಭೆಯಲ್ಲಿ ವಿರೋಧ ಪಕ್ಷದ ಸದಸ್ಯರ ನಡವಳಿಕೆಯನ್ನು ಪ್ರಶ್ನಿಸಿದರು. ಅಲ್ಲದೇ, ಜಂಟಿ ಸಂಸದೀಯ ಸಮಿತಿಯ ಅಧ್ಯಕ್ಷ ಜಗದಾಂಬಿಕಾ ಪಾಲ್ ವಿರುದ್ಧ ಕಲ್ಯಾಣ್ ಬ್ಯಾನರ್ಜಿ, ಅಸಂಸದೀಯ ಭಾಷೆಯನ್ನು ಬಳಸಿದ್ದಾರೆ ಎಂದು ಅವರು ಆರೋಪಿಸಿದರು. ಮತ್ತೊಂದೆಡೆ, ಕಲ್ಯಾಣ್ ಬ್ಯಾನರ್ಜಿ ಮಾತನಾಡಿ, ಸಭೆಯ ವಿಷಯವನ್ನು ಬದಲಾಯಿಸಲಾಗಿದೆ. ದೆಹಲಿ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ತುರ್ತಾಗಿ ವರದಿ ಸಿದ್ಧಪಡಿಸಲು ಪ್ರಯತ್ನಿಸಲಾಗುತ್ತಿದೆ ಎಂದು ಆರೋಪಿಸಿದರು. ೨೦೨೪ರ ವಕ್ಫ್ ತಿದ್ದುಪಡಿ ವಿಧೇಯಕವು ದಾಖಲೆಗಳ ಡಿಜಿಟಲೀಕರಣ, ಕಠಿಣ ಲೆಕ್ಕಪರಿಶೋಧನೆ, ಹೆಚ್ಚಿನ ಪಾರದರ್ಶಕತೆ ಮತ್ತು ಅಕ್ರಮವಾಗಿ ಆಕ್ರಮಿಸಿಕೊಂಡಿರುವ ವಕ್ಫ್ ಆಸ್ತಿಗಳನ್ನು ಮರಳಿ ಪಡೆಯಲು ಕಾನೂನು ಕಾರ್ಯವಿಧಾನಗಳು ಸೇರಿದಂತೆ ಗಮನಾರ್ಹ ಸುಧಾರಣೆಗಳನ್ನು ತರುವ ಗುರಿಯನ್ನು ಹೊಂದಿದೆ. ದೇಶಾದ್ಯಂತ ವಕ್ಫ್ ಆಸ್ತಿಗಳ ನಿರ್ವಹಣೆ ಮತ್ತು ನಿಯಂತ್ರಣವನ್ನು ಸುಧಾರಿಸುವ ಗುರಿಯನ್ನು ಈ ವಿಧೇಯಕ ಹೊಂದಿದೆ.

**<><*<><>*><>**

ಆದಾಯ ತೆರಿಗೆ ಕಾಯ್ದೆಯಡಿಯಲ್ಲಿ ಮೂಲದಲ್ಲಿ ಕಡಿತಗೊಳಿಸಿದ ತೆರಿಗೆ-ಟಿಡಿಎಸ್ ವ್ಯವಸ್ಥೆಯನ್ನು ರದ್ದುಗೊಳಿಸುವಂತೆ ಕೋರಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು-ಪಿಐಎಲ್ ಸುಪ್ರೀಂ ಕೋರ್ಟ್ ಇಂದು ವಜಾಗೊಳಿಸಿದೆ. ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿ ಸಂಜಯ್ ಕುಮಾರ್ ಅವರನ್ನೊಳಗೊಂಡ ನ್ಯಾಯಪೀಠವು, ಅರ್ಜಿದಾರರು ಹೈಕೋರ್ಟ್ ಸಂಪರ್ಕಿಸುವಂತೆ ಸಲಹೆ ನೀಡಿತು. ಟಿಡಿಎಸ್ ಕಾರ್ಯವಿಧಾನವು ಅನಿಯಂತ್ರಿತ. ಸಮಾನತೆಯ ಹಕ್ಕು ಸೇರಿದಂತೆ ಹಲವಾರು ಮೂಲಭೂತ ಹಕ್ಕುಗಳನ್ನು ಇದು ಉಲ್ಲಂಘಿಸುತ್ತದೆ ಎಂದು ಅರ್ಜಿದಾರರು ತಮ್ಮ ಅರ್ಜಿಯಲ್ಲಿ ಉಲ್ಲೇಖಿಸಿದ್ದರು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>